ಜೆಎಸ್‌ಎಸ್ ಮಹಾವಿದ್ಯಾಪೀಠ

ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಸ್ವಾಯತ್ತ)

ಬಿ.ಎನ್. ರಸ್ತೆ, ಮೈಸೂರು – 570 025

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ: 10.05.2017

## ಪ್ರಕಟಣೆಯ ಕೃಪೆಗಾಗಿ

## ಕ್ರೀಡಾ ಸಾಧನೆಯಿಂದ ಬದುಕು ರೂಪಿಸಿಕೊಳ್ಳಿ

– ಶ್ರೀಮತಿ ಎಚ್.ಎನ್. ಹೇಮಲತಾ, ಅಂತಾರಾಷ್ಟ್ರೀಯ ವಾಲಿಬಾಲ್ ಕ್ರೀಡಾಪಟು

ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಹಾಗೂ ಉದ್ಯೋಗವನ್ನು ಪಡೆಯುವಲ್ಲಿ ಕ್ರೀಡೆಯು ಜೀವನದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಮೈಸೂರಿನ ಅಂತಾರಾಷ್ಟ್ರೀಯ ವಾಲಿಬಾಲ್ ಕ್ರೀಡಾಪಟು ಶ್ರೀಮತಿ ಹೇಮಲತಾ ಎಚ್.ಎನ್ ರವರು ಮೈಸೂರಿನ ಬೆಂಗಳೂರು ನೀಲಗಿರಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ಸ್ನಾತಕೋತ್ತರ ವಿದ್ಯಾರ್ಥಿ ವೇದಿಕೆಯ ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾಗಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಟಿ.ಡಿ. ಸುಬ್ಬಣ್ಣನವರು ಆಟಗಳನ್ನು ಆಡುವುದರಿಂದ ಮನಸ್ಸಿನ ಏಕಾಗ್ರತೆ ಹೆಚ್ಚಾಗುತ್ತದೆ ಹಾಗೂ ವಿದ್ಯಾರ್ಥಿಗಳಲ್ಲಿ ಸೌಹಾರ್ದತೆ ಬೆಳೆಯುತ್ತದೆ. ಹೀಗೆ ತಮ್ಮ ಪ್ರತಿಭೆಯ ವಿಕಾಸದಿಂದ ಬದುಕನ್ನು ಉಜ್ವಲವಾಗಿ ರೂಪಿಸಿಕೊಳ್ಳರೆಂದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ವಿವಿಧ ಸಾಂಸ್ಕೃತಿಕ ಹಾಗೂ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಗಣ್ಯರು ಬಹುಮಾನಗಳನ್ನು ವಿತರಿಸಿದರು.

ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು, ಸಾಂಸ್ಕೃತಿಕ ವೇದಿಕೆಯ ಸಂಚಾಲಕರಾದ ಡಾ. ಎಂ.ಪಿ. ಸೋಮಶೇಖರ್‌ರವರು, ಕ್ರೀಡಾವೇದಿಕೆಯ ಸಂಚಾಲಕರಾದ ಶ್ರೀ ಟಿ. ಅರವಿಂದರವರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಕು. ಲಾಸ್ಯ ಪ್ರಾರ್ಥಿಸಿದರು. ಕು. ದಿಲೀಪ್ ವಿ ಎಂ ಸ್ವಾಗತಿಸಿದರು. ಕು. ಯೋಗೇಶ್ ಎಸ್ ವರದಿ ಓದಿದರು. ಕ್ರೀಡಾ ಚಟುವಟಿಕೆಗಳ ವಿಜೇತರ ಪಟ್ಟಿಯನ್ನು ಕು. ಐಶ್ವರ್ಯ, ಕು. ರಕ್ಷಿತ್‌ಕುಮಾರ್, ಸಾಂಸ್ಕೃತಿಕ ಚಟುವಟಿಕೆಗಳ ವಿಜೇತರ ಪಟ್ಟಿಯನ್ನು ಕು. ಸುಚಿಯಾ, ಕು. ನಿಶಾ ಓದಿದರು. ಕು, ಮೇಘನಾ ವಂದಿಸಿದರು. ಕು. ಸುಷ್ಮಿತ ನಿರೂಪಿಸಿದರು.

(ಪ್ರೊ.ಎಂ.ಮಹದೇವಪ್ಪ)

ಪ್ರಾಂಶುಪಾಲರು

ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

ಊಟಿ ರಸ್ತೆ, ಮೈಸೂರು–25

ಗೆ

ಸಂಪಾದಕರು

– – – – – – – – – –

– – – – – – – – – –

ಮೈಸೂರು